# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | 1271 (1279) |
| ಮಾನ್ಯ ಸದಸ್ಯರ ಹೆಸರು: | ಡಾ:ಯತೀಂದ್ರ.ಎಸ್ (ವಿಧಾನಸಭೆಯಿಂದ |
| ಉತ್ತರಿಸಬೇಕಾದ ದಿನಾಂಕ: | 22.08.2025 |
| ಉತ್ತರಿಸುವ ಸಚಿವರು: | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು. |

| ಕ್ರ.ಸಂ | ಪ್ರಶ್ನೆ | ನಿಗಮದ ಉತ್ತರ |
|---|---|---|
| ಅ | ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಡಿ ಒದಗಿಸುವ ಸ್ವಾವಲಂಬಿ ಸಾರಥಿ ಯೋಜನೆಗೆ ಪ್ರತಿ ವರ್ಷ ಸಾವಿರಾರು ಆಕಾಂಕ್ಷಿಗಳು ಅರ್ಜಿಗಳನ್ನು ಸಲ್ಲಿಸುತ್ತಿದ್ದು, ಯೋಜನಾ ಗುರಿ ಕಡಿಮೆ ಇರುವುದರಿಂದ ಫಲಾನುಭವಿಗಳ ಆಯ್ಕೆ ಕ್ಲಿಷ್ಟಕರವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗಮನಕ್ಕೆ ಬಂದಿದೆ.<br><br>ಆಯಾ ಆರ್ಥಿಕ ವರ್ಷದ ಆಯ-ವ್ಯಯದಲ್ಲಿ ನಿಗಮಗಳಿಗೆ ಒದಗಿಸುವ ಅನುದಾನಕ್ಕೆ ಅನುಗುಣವಾಗಿ ಯೋಜನೆವಾರು ಕ್ರಿಯಾ ಯೋಜನೆ ರೂಪಿಸಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. |
| ಆ | ಬಂದಿದ್ದಲ್ಲಿ, ಯೋಜನಾ ಗುರಿ ಹೆಚ್ಚಿಸುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು) | 2024-25ನೇ ಸಾಲಿನಲ್ಲಿ ಭೌತಿಕ-250 ಮತ್ತು ಆರ್ಥಿಕ 750.00 ಲಕ್ಷ ರೂ.ಗಳ ಗುರಿ ನಿಗಧಿಪಡಿಸಲಾಗಿತ್ತು. ಪ್ರಸಕ್ತ ಸಾಲಿನಲ್ಲಿ ಸ್ವಾವಲಂಬಿ ಸಾರಥಿ ಯೋಜನೆಯಡಿ ಭೌತಿಕ-1500 ಆರ್ಥಿಕ 4500.00 ಲಕ್ಷಗಳ ಗುರಿ ನಿಗಧಿಪಡಿಸಿದೆ. |
| ಇ | ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಡಿ ಒದಗಿಸುವ ಸ್ವಾವಲಂಬಿ ಸಾರಥಿ ಯೋಜನೆಯಡಿ ಘಟಕ ವೆಚ್ಚ ಕಡಿಮೆ ಇದ್ದು ಫಲಾನುಭವಿಗಳಿಗೆ ಸಾಲ ಹೊರೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಘಟಕ ವೆಚ್ಚ ಹೆಚ್ಚಿಸುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು) | ಈ ಯೋಜನೆಯನ್ನು ಬ್ಯಾಂಕ್/ಹಣಕಾಸು ಸಂಸ್ಥೆಗಳ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ.<br>ನಿಗಮದಿಂದ ಘಟಕ ವೆಚ್ಚದ ಶೇಕಡ 50ರಷ್ಟು ಅಥವಾ ಗರಿಷ್ಠ ರೂ.3.00 ಲಕ್ಷ ಇವುಗಳಲ್ಲಿ ಯಾವುದು ಕಡಿಮೆಯೊ ಅಷ್ಟು ಸಹಾಯ ಧನವನ್ನು ಒದಗಿಸಲಾಗುತ್ತಿದೆ. ಉಳಿಕೆ ಮೊತ್ತವನ್ನು ಫಲಾನುಭವಿಯು ಬ್ಯಾಂಕ್/ಹಣಕಾಸು ಸಂಸ್ಥೆಯಿಂದ ಸಾಲ ಪಡೆಯಬಹುದಾಗಿದೆ. |

**ಸಂಖ್ಯೆ: ಬಿಸಿಡಬ್ಲ್ಯೂ 879 ಬಿಎಂಎಸ್ 2025**

**(ಶಿವರಾಜ ಎಸ್ ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು